ಕ್ರೀಡಾಂಗಣ ನಿರ್ಮಿಸುವುದು

1039 (1882); ಶ್ರೀ ಅಶೋಕ್ ಖೇಣಿ (ಬೀದರ್ ದಕ್ಷಿಣ)

ಅ) ಬೀದರ್–ದಕ್ಷಿಣ ವಿಧಾನ ಸಭಾ ಕ್ಷೇತ್ರದಲ್ಲಿ ಎಷ್ಟು ಕ್ರೀಡಾಂಗಣಗಳು ಇವೆ;

ಆ) ಕಳೆದ 3 ವರ್ಷದಿಂದ 2014–15ರ ವರೆಗೆ ಕ್ರೀಡಾಂಗಣಕ್ಕೆ ಸಂಬಂಧಿಸಿದಂತೆ ಬಿಡುಗಡೆಯಾದ ಅನುದಾನದ ಮೊತ್ತವೆಷ್ಟು;

ಇ) ಪ್ರಸಕ್ತ ಸಾಲಿನಲ್ಲಿ ಕ್ರೀಡಾ ಹಾಸ್ಟೆಲ್ ನಿರ್ಮಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಈ) ಹಾಗಿದ್ದಲ್ಲಿ, ಯಾವಾಗ ಪ್ರಾರಂಭ ಮಾಡಲಾಗುವುದು?

ಶ್ರೀ ಕೆ. ಅಭಯಚಂದ್ರ (ಮಾನ್ಯ ಯುವಜನ ಸೇವಾ ಹಾಗೂ ಮೀನುಗಾರಿಕೆ ಸಚಿವರು)

ಅ) ಯಾವುದೇ ಕ್ರೀಡಾಂಗಣ ಇರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಇಲ್ಲ.

ಈ) ಉದ್ಭವಿಸುವುದಿಲ್ಲ.

ವಿದ್ಯಾರ್ಥಿಗಳಿಗೆ ಮತ್ತು ನಿರುದ್ಯೋಗಿಗಳಿಗೆ ಕಾಲಕಾಲಕ್ಕೆ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳನ್ನು ನೀಡದಿರುವುದು

1040 (1741); ಶ್ರೀ ಅಶೋಕ್ ಆರ್. (ಪದ್ಮನಾಭ ನಗರ)

(ಅ) ಶಿಕ್ಷಣ ಮತ್ತು ಉದ್ಯೋಗಾವಕಾಶಗಳ ಉಪಯೋಗಕ್ಕಾಗಿ ಸರ್ಕಾರದಿಂದ ನೀಡುವ ಆದಾಯ ಮತ್ತು ಜಾತಿ ಪ್ರಮಾಣ ಪತ್ರಗಳನ್ನು ನೀಡುವ ಅವಧಿಯನ್ನು 21 ದಿನಗಳಿಗೆ ಏರಿಸಿರುವುದರಿಂದ ವಿದ್ಯಾರ್ಥಿಗಳಿಗೆ

ಮತ್ತು ನಿರುದ್ಯೋಗಿಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬೆಂಗಳೂರು ನಗರ ಜಿಲ್ಲೆ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲಾ ಪ್ರದೇಶಗಳ ವಿಧಾನಸಭಾ ಕ್ಷೇತ್ರಗಳಲ್ಲಿ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳನ್ನು ಹಾಗೂ ಬೇರೆ ಬೇರೆ ದಾಖಲೆಗಳನ್ನು ನೀಡಲು ಯಾವ ರೀತಿಯ ಕ್ರಮವನ್ನು ಕಂದಾಯ ಇಲಾಖೆ ಕೈಗೊಂಡಿರುತ್ತದೆ;

ಇ) ವಿದ್ಯಾರ್ಥಿಗಳಿಗೆ ಮತ್ತು ನಿರುದ್ಯೋಗಿ ಯುವಕರುಗಳಿಗೆ ಜಾತಿ ಮತ್ತು ಆದಾಯ ಪ್ರಮಾಣ ಪತ್ರವನ್ನು ಕಡಿಮೆ ಅವಧಿಯಲ್ಲಿ ನೀಡಲು ಸರ್ಕಾರವು ತುರ್ತು ಕ್ರಮ ಕೈಗೊಳ್ಳುವುದೇ;

ಶ್ರೀ ವಿ. ಶ್ರೀನಿವಾಸ ಪ್ರಸಾದ (ಮಾನ್ಯ ಕಂದಾಯ ಸಚಿವರು)

ಅ) ಶೈಕ್ಷಣಿಕ ಉಪಯೋಗಕ್ಕಾಗಿ 2014–15ನೇ ಸಾಲಿನಲ್ಲಿ ವಿದ್ಯಾರ್ಥಿಗಳಿಗೆ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳನ್ನು ಶಾಲಾ ಮುಖೇನ ವಿತರಿಸುವ ವಿಶೇಷ ಕಾರ್ಯಕ್ರಮವನ್ನು ಅಟಲ್‌ಜೀ ಜನಸ್ನೇಹಿ ಕೇಂದ್ರ ಯೋಜನೆಯಡಿಯಲ್ಲಿ ಹಮ್ಮಿಕೊಳ್ಳಲಾಗಿದ್ದು, ಈ ಕಾರ್ಯಕ್ರಮದಡಿಯಲ್ಲಿ ವಿದ್ಯಾರ್ಥಿಗಳಿಂದ 59,14,817 ಅರ್ಜಿಗಳು ಸ್ವೀಕೃತಗೊಂಡಿದ್ದು, ಸದರಿ ಅರ್ಜಿಗಳನ್ನು ನಾಡಕಛೇರಿ ಮತ್ತು ತಾಲ್ಲೂಕು ಕಛೇರಿಗಳಲ್ಲಿ ಸಂಸ್ಕರಿಸಿ ಅನುಮೋದಿತ ಪ್ರಮಾಣ ಪತ್ರಗಳನ್ನು ಸಂಬಂಧಿಸಿದ ಶಾಲೆಗಳಿಗೆ ವಿತರಿಸಲಾಗುತ್ತಿದೆ ಹಾಗೂ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳನ್ನು ನೀಡುವ ಅವಧಿಯನ್ನು ಸಕಾಲ ಅವಧಿಯೊಳಗೆ ನಿಗದಿ ಪಡಿಸಲಾಗಿದ್ದು, ಸದರಿ ನಿಗದಿ ಪಡಿಸಿದ ಅವಧಿಯೊಳಗೆ ಪ್ರಮಾಣ ಪತ್ರಗಳನ್ನು ಸಾರ್ವಜನಿಕರಿಗೆ ಯಾವುದೇ ವಿಳಂಬಕ್ಕೆ ಅವಕಾಶ ನೀಡದೇ ಅಟಲ್‌ಜೀ ಜನಸ್ನೇಹಿ ಕೇಂದ್ರಗಳಲ್ಲಿ ವಿತರಿಸಲಾಗುತ್ತಿದೆ.

ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳನ್ನು ನೀಡಲು ನಿಯಮಾನುಸಾರ ಕ್ಷೇತ್ರ ಪರಿಶೀಲನೆ ಮಾಡುವುದು ಅಗತ್ಯವಿರುತ್ತದೆ. ಜಾತಿ ಮತ್ತು ಆದಾಯ ಪ್ರಮಾಣ ಪತ್ರವನ್ನು ಓವರ್ ದ ಕೌಂಟರ್‌ನಲ್ಲಿ ನೀಡುವ

ಸೇವೆಯು ಅನುಷ್ಠಾನಕ್ಕೆ ಬಂದಲ್ಲಿ ಅರ್ಜಿಗಳನ್ನು ಕ್ಷೇತ್ರ ಪರಿಶೀಲನೆ ಗೊಳಪಡಿಸುವುದನ್ನು ತಪ್ಪಿಸಬಹುದಾಗಿದ್ದು, 21 ದಿವಸಗಳ ಕಾಲಾವಧಿಯು ಅಗತ್ಯವಿರುವುದಿಲ್ಲ.

ಆ) ಅಟಲ್‌ಜೀ ಜನಸ್ನೇಹಿ ಕೇಂದ್ರ ಯೋಜನೆಯ ವಿವಿಧ ಸೇವೆಗಳಡಿಯಲ್ಲಿ ಸಾರ್ವಜನಿಕರಿಗೆ ವಿತರಿಸಲಾಗುತ್ತಿರುವ 34 ವಿವಿಧ ಪ್ರಮಾಣ ಪತ್ರಗಳಿಗಾಗಿ ಸಾರ್ವಜನಿಕರಿಂದ ಅಟಲ್‌ಜೀ ಜನಸ್ನೇಹಿ ಕೇಂದ್ರಗಳಲ್ಲಿ ಸ್ವೀಕೃತವಾಗುವ ಅರ್ಜಿಗಳನ್ನು ಕ್ಷೇತ್ರ ಪರಿಶೀಲನೆಗೊಳಪಡಿಸಿ, ಅನುಮೋದಿತ ಪ್ರಮಾಣ ಪತ್ರಗಳನ್ನು ತಹಶೀಲ್ದಾರರು ಮತ್ತು ಉಪ ತಹಶೀಲ್ದಾರರಿಂದ ವಿದ್ಯುನ್ಮಾನ ಸಹಿಗೊಳಪಡಿಸಿ, ಎಲ್ಲಾ ನಾಡಕಛೇರಿಗಳಲ್ಲಿ ವಿತರಿಸುವ ಮಾದರಿಯಲ್ಲಿಯೇ ಬೆಂಗಳೂರು ನಗರ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆಗಳ ನಾಡಕಛೇರಿಗಳಲ್ಲಿ ಸಾರ್ವಜನಿಕರಿಗೆ ನಿಗದಿತ ಅವಧಿಯೊಳಗೆ ವಿತರಿಸಲಾಗುತ್ತಿದೆ.

ಇ) ನಾಗರೀಕರ ದತ್ತ ಸಂಚಯವನ್ನು ನಿರ್ಮಿಸಿ ಅದನ್ನು ಬಳಸಿಕೊಂಡು ತಕ್ಷಣದಲ್ಲಿಯೇ ಸೇವೆಯನ್ನು ಒದಗಿಸುವ ಓವರ್ ದ ಕೌಂಟರ್ ಸೇವೆಯು ಪ್ರಸ್ತುತ ಅನುಷ್ಠಾನದ ಹಂತದಲ್ಲಿದ್ದು, ಈ ಸೇವೆಯಡಿಯಲ್ಲಿ ವಿದ್ಯಾರ್ಥಿಗಳಿಗೆ ಮತ್ತು ನಿರುದ್ಯೋಗಿ ಯುವಕರಿಗೆ ಜಾತಿ ಮತ್ತು ಆದಾಯ ಪ್ರಮಾಣ ಪತ್ರವನ್ನು ಕಡಿಮೆ ಅವಧಿಯಲ್ಲಿ ನೀಡಲಾಗುವುದು.

ಗಿಡಗಳನ್ನು ನಡೆವುದು

1041 (1742); ಶ್ರೀ ಅಶೋಕ್ ಆರ್. (ಪದ್ಮನಾಭನಗರ)

ಅ) ಗ್ರಾಮಾಂತರ ಪ್ರದೇಶದಲ್ಲಿ ಕಳೆದ 2 ವರ್ಷಗಳ ಅವಧಿಯಲ್ಲಿ ರಸ್ತೆ ಬದಿಗಳಲ್ಲಿ ಗಿಡಗಳನ್ನು ನಡಲು ಸರ್ಕಾರದಿಂದ ಖರ್ಚು ಮಾಡಿರುವ ಹಣದ ಮೊತ್ತವೆಷ್ಟು;

ಆ) ಕಳೆದ 2 ವರ್ಷಗಳ ಅವಧಿಯಲ್ಲಿ ಎಷ್ಟು ಗಿಡಗಳನ್ನು ರಸ್ತೆ ಬದಿಗಳಲ್ಲಿ ನೆಡಲಾಗಿದೆ;